**Akashvani: Bangalore**
**Regional Bulletin In Kannada**
**26.03.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**26.03.2026: 14.30hrs**

*********

**ಮುಖ್ಯಾಂಶಗಳು:**

1. ಗ್ಯಾರಂಟಿ ಯೋಜನೆಗಳ ಜಾರಿಯಿಂದ ರಾಜ್ಯದಲ್ಲಿ ರಾಜಸ್ವ ಕೊರತೆ - ಭಾರತದ ಮಹಾಲೆಕ್ಕ ಪರಿಶೋಧಕರ ವರದಿಯಲ್ಲಿ ಬಹಿರಂಗ
2. ಜಾಗತಿಕ ಹತ್ತು ತಂತ್ರಜ್ಞಾನ ಕೇಂದ್ರಗಳಲ್ಲಿ ಬೆಂಗಳೂರಿಗೆ ೬ನೇ ಸ್ಥಾನ; ವಿಧಾನಸಭೆಯಲ್ಲಿ ಉಪಮುಖ್ಯಮಂತ್ರಿ ಸಮರ್ಥನೆ
3. ಗುಜರಾತ್‌ನಿಂದ ೧೬ ಸಾವಿರ ಮೆಟ್ರಿಕ್ ಟನ್ ಎಲ್‌ಪಿಜಿ ಹೊತ್ತ ಅಪೋಲೋ ಓಶಿಯನ್ ಸರಕು ಹಡಗು ನವಮಂಗಳೂರು ಬಂದರಿಗೆ ಆಗಮನ
4. ವಿಧಾನಸಭಾ ಉಪಚುನಾವಣೆ; ಅಭ್ಯರ್ಥಿಗಳು ನಾಮಪತ್ರ ಹಿಂಪಡೆಯಲು ಇಂದು ಕೊನೆಯ ದಿನ
5. ಖೇಲೋ ಇಂಡಿಯಾ ಆದಿವಾಸಿ ಕ್ರೀಡಾಕೂಟ; ಪದಕ ಪಟ್ಟಿಯಲ್ಲಿ ಅಗ್ರಸ್ಥಾನ ಕಾಯ್ದುಕೊಂಡ ಕರ್ನಾಟಕ

**********

ರಾಜ್ಯದ ೫ ಗ್ಯಾರಂಟಿ ಯೋಜನೆಗಳ ಜಾರಿಯಿಂದ ೨೦೨೩-೨೪ ಹಾಗೂ ೨೦೨೪-೨೫ರಲ್ಲಿ ರಾಜ್ಯವು ರಾಜಸ್ವ ಹೆಚ್ಚುವರಿಯಿಂದ ರಾಜಸ್ವ ಕೊರತೆಗೆ ಬದಲಾಗಿದೆ ಎಂದು ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕ ಪರಿಶೋಧಕರ ವರದಿಯಲ್ಲಿ ಉಲ್ಲೇಖಿಸಲಾಗಿದೆ.ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರವಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಂಡಿಸಿದ ವರದಿ ಸಂಖ್ಯೆ ೧ ರಲ್ಲಿ ಈ ಉಲ್ಲೇಖ ಮಾಡಲಾಗಿದೆ. ಖಾತ್ರಿ ಯೋಜನೆಗಳಿಂದ ೨೦೨೪-೨೫ರಲ್ಲಿ ಸಹಾಯಧನಗಳು ತೀವ್ರವಾಗಿ ಹೆಚ್ಚಾಗಿವೆ. ರಾಜಸ್ವದ ಕೊರತೆಯನ್ನು ಸಾಲದ ಮೊತ್ತದಿಂದ ಭರಿಸಲಾಗುತ್ತಿದೆ ಎಂದು ವರದಿಯಲ್ಲಿ

ತಿಳಿಸಲಾಗಿದೆ. ಕರ್ನಾಟಕ ಈ ವರ್ಷ ಶೇಕಡ ೮.೭೨ರಷ್ಟು ಕೊಡುಗೆಯನ್ನು ದೇಶಕ್ಕೆ ನೀಡಿದ್ದು, ರಾಷ್ಟ್ರೀಯ ಸರಾಸರಿಗಿಂತ ಉತ್ತಮ ಸಾಧನೆ ಮಾಡಿದೆ ಎಂದು ಹೇಳಲಾಗಿದೆ.ಸ್ವಂತ ರಾಜಸ್ವದಲ್ಲಿನ ಬೆಳವಣಿಗೆಯ ಅನುಪಾತವು ಜಿಎಸ್‌ಡಿಪಿಯ ಬೆಳವಣಿಗೆಗೆ ೦.೭೫ ರಷ್ಟು ಆಗಿತ್ತು. ಇದು ಹಿಂದಿನ ಮೂರು ವರ್ಷಗಳಿಗಿಂತ ಕಡಿಮೆಯಾಗಿದೆ. ಜಿಎಸ್‌ಟಿ ಜಾರಿಗೆ ಬಂದ ನಂತರ ರಾಜ್ಯದ ಒಟ್ಟು ತೆರಿಗೆ ಸಂಗ್ರಹ ಶೇಕಡ ೫೫ ರಿಂದ ಶೇಕಡ ೪೩ಕ್ಕೆ ಇಳಿಕೆಯಾಗಿದೆ. ಇ ಖಾತಾ ಪರಿಚಯಿಸಿದ್ದರಿಂದ ಆಸ್ತಿಗಳ ನೊಂದಣಿಯಲ್ಲಿನ ಕುಸಿತಕ್ಕೆ ಕಾರಣವಾಗಿ, ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕಗಳಲ್ಲಿ ಇಳಿಕೆಯಾಗಿದೆ ಎಂದು ಉಲ್ಲೇಖಿಸಿದೆ.

**********

ಬೆಂಗಳೂರು ಟಾಪ್ ಹತ್ತು ಜಾಗತಿಕ ತಂತ್ರಜ್ಞಾನ ಕೇಂದ್ರಗಳಲ್ಲಿ ಒಂದಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿಂದು ಮಾತನಾಡಿದ ಅವರು, ಸ್ಯಾನ್ ಫ್ರಾನ್ಸಿಸ್ಕೋ ಮೊದಲ ಸ್ಥಾನದಲ್ಲಿದ್ದು, ಲಂಡನ್ ಎರಡನೇ ಸ್ಥಾನದಲ್ಲಿದೆ. ಬೆಂಗಳೂರು ಆರನೇ ಸ್ಥಾನದಲ್ಲಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ. ೨೬ನೇ ಸ್ಥಾನದಲ್ಲಿರುವ ಹೈದರಾಬಾದ್‌ನೊಂದಿಗೆ ಬೆಂಗಳೂರು ಸ್ಪರ್ಧಿಸಲು ಬಯಸುವುದಿಲ್ಲ ಎಂದು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ೨೫೦ ಇಂಜಿನಿಯರಿಂಗ್ ಕಾಲೇಜುಗಳು, ೭೦ ವೈದ್ಯಕೀಯ ಕಾಲೇಜುಗಳಿವೆ. ಇದನ್ನು ದೇಶದಲ್ಲಿ ಬೇರೆಲ್ಲೂ ಕಾಣಲು ಸಾಧ್ಯವಿಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ. ಇದೇ ವೇಳೆ ಬೆಂಗಳೂರಿನಲ್ಲಿ ೨೬ ಲಕ್ಷ ಐಟಿ ವೃತ್ತಿಪರರಿದ್ದು, ಫಾರ್ಚೂನ್ ೫೦೦ ಕಂಪನಿಗಳಲ್ಲಿ ೪೦೦ ಕಂಪನಿಗಳು ಬೆಂಗಳೂರಿನಲ್ಲಿವೆ ಎಂದು ಬೆಂಗಳೂರು ಅಭಿವೃದ್ಧಿಯ ಬಗ್ಗೆ ಸದನಕ್ಕೆ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದ್ದಾರೆ.

**********

ಈವರೆಗೆ ಮಂಡಿಸಿದ ೧೭ ಆಯವ್ಯಯಗಳಲ್ಲಿ ರಾಜ್ಯದ ಜನರ ಹಿತ ಕಾಪಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ. ವಿಧಾನಪರಿಷತ್‌ನಲ್ಲಿಂದು ಬಜೆಟ್ ಮೇಲಿನ ಚರ್ಚೆಗೆ ಉತ್ತರಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರಗಳು ಆರ್ಥಿಕವಾಗಿ

ಸದೃಢವಾದರೆ, ಕೇಂದ್ರ ಸರ್ಕಾರವು ಸದೃಢವಾಗಲಿದೆ. ಅದೇ ರೀತಿ ಕೇಂದ್ರ ಸರ್ಕಾರ ಸದೃಢವಾದಕ್ಷ, ರಾಜ್ಯಗಳು ಪ್ರಬಲವಾಗುತ್ತವೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರವನ್ನು ಟೀಕೆ ಮಾಡಲೇಬಾರದು ಅಂದರೆ ಹೇಗೆ ಎಂದು ಪ್ರಶ್ನಿಸಿದ್ದಾರೆ. ಇದೇ ವೇಳೆ, ವಿಮಾನ ಪ್ರಯಾಣ ಮತ್ತು ಹೆಲಿಕಾಪ್ಟರ್ ಪ್ರಯಾಣಕ್ಕೆ ದುಂದು ವೆಚ್ಚ ಮಾಡಲಾಗುತ್ತಿದೆ ಎಂಬ ಪ್ರತಿಪಕ್ಷಗಳ ಆರೋಪಕ್ಕೆ ಉತ್ತರ ನೀಡಿದ ಅವರು, ಕೆಲವು ಸಂದರ್ಭಗಳಲ್ಲಿ ಸಮಯ ಉಳಿಸಲು ವಿಮಾನ ಇಲ್ಲವೇ ಹೆಲಿಕಾಪ್ಟರ್‌ನಲ್ಲಿ ಪ್ರಯಾಣಿಸಬೇಕಾಗುತ್ತದೆ ಎಂದು ತಮ್ಮ ನಡೆಯನ್ನು ಸಮರ್ಥಿಸಿಕೊಂಡಿದ್ದಾರೆ.

**********

ಮಧ್ಯಪ್ರಾಚ್ಯ ದೇಶಗಳ ಸಂಘರ್ಷದ ನಡುವೆಯೂ ಕಳೆದ ರಾತ್ರಿ ಅಪೋಲೋ ಓಶಿಯನ್ ಹೆಸರಿನ ಎಲ್‌ಪಿಜಿ ಹಡಗು ನವ ಮಂಗಳೂರು ಬಂದರು ತಲುಪಿದೆ. ರಾತ್ರಿಯೇ ದ್ರವೀಕೃತ ಪೆಟ್ರೋಲಿಯಂ ಅನಿಲವನ್ನು ಹಡಗಿನಿಂದ ತೆಗೆಯುವ ಕಾರ್ಯ ಆರಂಭಗೊಂಡಿದೆ. ಇತ್ತೀಚೆಗೆ ವಿದೇಶದಿಂದ ದ್ರವೀಕೃತ ಪೆಟ್ರೋಲಿಯಂ ಅನಿಲ ತಂದಿದ್ದ  ಶಿವಾಲಿಕ್ ಹೆಸರಿನ ಸರಕು ಹಡಗು ನೇರವಾಗಿ ಗುಜರಾತ್ ಬಂದರಿಗೆ ತೆರಳಿತ್ತು. ಗುಜರಾತ್‌ನಿಂದ ಎಲ್‌ಪಿಜಿಯನ್ನು, ಅಪೋಲೋ ಓಶಿಯನ್ ಸರಕು ಹಡಗಿನ ಮೂಲಕ ನವ ಮಂಗಳೂರು ಬಂದರಿಗೆ ತರಿಸಲಾಗಿದೆ. ಒಟ್ಟು ೧೬ ಸಾವಿರ ಮೆಟ್ರಿಕ್ ಟನ್ ಎಲ್‌ಪಿಜಿ ಹೊತ್ತ ಈ ನೌಕೆ ಕಳೆದ ರಾತ್ರಿ  ಬಂದರು ತಲುಪಿದೆ.ಶೀಘ್ರದಲ್ಲೇ ಮತ್ತೆರಡು ಕಚ್ಚಾತೈಲ ಹೊತ್ತ ಹಡಗುಗಳು ಮಂಗಳೂರಿಗೆ ಆಗಮಿಸಲಿದ್ದು, ಅವು ತಲುಪುವ ದಿನಾಂಕ ಇನ್ನಷ್ಟೇ ತಿಳಿಯಲಿದೆ ಎಂದು ನವಮಂಗಳೂರು ಬಂದರು ಪ್ರಾಧಿಕಾರದ ಮೂಲಗಳು ತಿಳಿಸಿವೆ.

**********

ತೀವ್ರ ಕುತೂಹಲ ಕೆರಳಿಸಿರುವ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ನಾಮಪತ್ರ ಹಿಂಪಡೆಯಲು ಇಂದು ಕೊನೆಯ ದಿನವಾಗಿದೆ. ಈವರೆಗೆ ೭೧ ನಾಮಪತ್ರಗಳ ಪೈಕಿ ೫೦ ಅಭ್ಯರ್ಥಿಗಳ ಅರ್ಜಿ ಕ್ರಮಬದ್ಧವಾಗಿವೆ. ಶಾಸಕರಾದ ಶ್ಯಾಮನೂರು ಶಿವಶಂಕರಪ್ಪ ನಿಧನದಿಂದ ತೆರವಾಗಿರುವ ಸ್ಥಾನಕ್ಕೆ ಉಪಚುನಾವಣೆ ನಡೆಯುತ್ತಿದ್ದು, ಅವರ

ಬೊಮ್ಮಾಗ ಸಮರ್ಥ್ ಶ್ಯಾಮನೂರು ಕಣಕ್ಕಿಳಿದಿದ್ದಾರೆ. ಬಂಡಾಯ ಅಭ್ಯರ್ಥಿಯಾಗಿ ಸಾದಿಕ್ ಪೈಲಾನ್ ಉಮೇದುವಾರಿಕೆ ಸಲ್ಲಿಸಿದ್ದಾರೆ. ಬಿಜೆಪಿಯಿಂದ ಶ್ರೀನಿವಾಸ ದಾಸ ಕರಿಯಪ್ಪ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಬಾಗಲಕೋಟೆ ಕ್ಷೇತ್ರದಲ್ಲಿ ಎಚ್. ವೈ. ಮೇಟಿ ನಿಧನದಿಂದ ತೆರವಾಗಿರುವ ಸ್ಥಾನಕ್ಕೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಉಮೇಶ್ ಮೇಟಿ ಸ್ಪರ್ಧಿಸಿದ್ದಾರೆ. ಬಂಡಾಯ ಅಭ್ಯರ್ಥಿಯಾಗಿ ಗೋವಿಂದರಾಜು ಬಳ್ಳಾರಿ ಉಮೇದುವಾರಿಕೆ ಸಲ್ಲಿಸಿದ್ದಾರೆ. ಸಂಜೆಯ ಬಳಿಕ ಕಣದಲ್ಲಿರುವ ಅಭ್ಯರ್ಥಿಗಳ ಸ್ಪಷ್ಟ ಚಿತ್ರಣ ದೊರೆಯಲಿದೆ. ಏಪ್ರಿಲ್ ಒಂಬತ್ತರಂದು ಎರಡು ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿದ್ದು, ಮೇ ನಾಲ್ಕರಂದು ಫಲಿತಾಂಶ ಹೊರಬೀಳಲಿದೆ.

**********

ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳು ಗ್ರಾಹಕರಿಂದ ಎಲ್‌ಪಿಜಿ ಶುಲ್ಕ ಅಥವಾ ಇಂಧನ ವೆಚ್ಚ ವಸೂಲಿ ಎಂಬ ಹೆಸರಿನಲ್ಲಿ ಹೆಚ್ಚುವರಿ ಹಣ ಪಡೆಯದಂತೆ ಕೇಂದ್ರ ಗ್ರಾಹಕ ಸಂರಕ್ಷಣಾ ಪ್ರಾಧಿಕಾರ, ಕಟ್ಟುನಿಟ್ಟಿನ ಸೂಚನೆ ನೀಡಿದೆ. ಹೋಟೆಲ್‌ಗಳು ಕೇವಲ ಮೆನುವಿನಲ್ಲಿ ತಿಳಿಸಿರುವ ದರ ಮತ್ತು ಅನ್ವಯವಾಗುವ ತೆರಿಗೆಗಳನ್ನು ಮಾತ್ರ ಬಿಲ್‌ನಲ್ಲಿ ಸೇರಿಸಬೇಕು. ಅಡುಗೆ ಅನಿಲ ಅಥವಾ ಇಂಧನದ ದರ ಏರಿಕೆಯ ನೆಪದಲ್ಲಿ ಪ್ರತ್ಯೇಕ ಶುಲ್ಕ ವಿಧಿಸುವಂತಿಲ್ಲ ಎಂದು ತಿಳಿಸಿದೆ.ಒಂದು ವೇಳೆ ಬಿಲ್‌ನಲ್ಲಿ ಇಂತಹ ಕಾನೂನುಬಾಹಿರ ಶುಲ್ಕಗಳನ್ನು ಸೇರಿಸಿದ್ದರೆ ಹೋಟೆಲ್ ಸಿಬ್ಬಂದಿಗೆ ಬಿಲ್‌ನಿಂದ ಆ ಶುಲ್ಕವನ್ನು ತೆಗೆದುಹಾಕಲು ಗ್ರಾಹಕರು ತಿಳಿಸಬೇಕು. ಒಂದು ವೇಳೆ ಅವರು ಒಪ್ಪದಿದ್ದರೆ, ರಾಷ್ಟ್ರೀಯ ಗ್ರಾಹಕ ಸಹಾಯವಾಣಿ ಸಂಖ್ಯೆ ೧-೯-೧-೫ ಕ್ಕೆ ಕರೆ ಮಾಡಿ ದೂರು ನೀಡಬಹುದು. ಇಲ್ಲವೆ ನೇರವಾಗಿ ಜಿಲ್ಲಾಧಿಕಾರಿಗಳಿಗೆ ಲಿಖಿತ ದೂರು ನೀಡಲು ಅವಕಾಶವಿದೆ ಎಂದು ಆಯೋಗ ಸ್ಪಷ್ಟಪಡಿಸಿದೆ.

**********

ಮಡಿಕೇರಿ ಬಳಿಯ ಇಬ್ಬನಿ ವಳವಾಡಿ ಗ್ರಾಮದ ಕಾಫಿ ತೋಟವೊಂದರಲ್ಲಿ ಹುಲಿಯ ಸುಳಿವು ಪತ್ತೆಯಾದ ಹಿನ್ನಲೆಯಲ್ಲಿ ಅರಣ್ಯ ಇಲಾಖೆಯಿಂದ ಹುಲಿ ಸರೆ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಗ್ರಾಮದ ಕಾಫಿ ತೋಟವೊಂದರಲ್ಲಿ ವ್ಯಾಘ್ರ ಹಾಡು ಹಗಲಿನಲ್ಲಿಯೇ ಸಂಚರಿಸುತ್ತಿದ್ದ ದೃಶ್ಯ ಸಿಸಿ ಕ್ಯಾಮರದಲ್ಲಿ ಸೆರೆಯಾಗಿತ್ತು. ಇದರಿಂದಾಗಿ ಗ್ರಾಮಸ್ಥರಲ್ಲಿ ಆತಂಕ ಹೆಚ್ಚಾದ ಹಿನ್ನಲೆಯಲ್ಲಿ ಶಾಸಕ

ಡಾ.ಮಂಥರ್ ಗೌಡ ಮುನ್ನೆಚ್ಚರಿಕೆ ಕ್ರಮವಾಗಿ ಹುಲಿಯನ್ನು ಸೆರೆ ಹಿಡಿಯುವಂತೆ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದ್ದರು. ಸಾಕಾನೆಗಳಾದ ಪ್ರಶಾಂತ, ಕಾಂಚನ್, ಈಶ್ವರನ ಸಹಾಯದೊಂದಿಗೆ ಇಬ್ಬನಿ ವಳವಾಡಿ ಗ್ರಾಮದಲ್ಲಿ ಹುಲಿಯ ಪತ್ತೆಗಾಗಿ ಕಾರ್ಯಾಚರಣೆ ಕೈಗೊಳ್ಳಲಾಗಿದೆ.

**********

ಮಂಗಳೂರಿನ ಜಿಲ್ಲಾ ವೆನ್‌ಲಾಕ್ ಆಸ್ಪತ್ರೆಯ ಸಮಗ್ರ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್ ತಯಾರಿಸಿ ಕಾರ್ಯರೂಪಕ್ಕೆ ತರುವಂತೆ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ಸೂಚಿಸಿದ್ದಾರೆ. ಆರೋಗ್ಯ ರಕ್ಷಾ ಸಮಿತಿ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಸ್ಪತ್ರೆಯಲ್ಲಿ ವಿವಿಧ ವಿಭಾಗಗಳನ್ನು ರೋಗಿಗಳಿಗೆ ಜನಸ್ನೇಹಿಯಾಗಿ ಕಾರ್ಯರೂಪಕ್ಕೆ ತರಲು ಮಾಸ್ಟರ್ ಪ್ಲಾನ್ ಅಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಶೀಘ್ರವಾಗಿ ಕಾರ್ಯಪ್ರವೃತ್ತರಾಗಬೇಕು ಎಂದು ನಿರ್ದೇಶನ ನೀಡಿದ್ದಾರೆ. ಪ್ರಸಕ್ತ ಇರುವ ಹೊರರೋಗಿ ವಿಭಾಗಗಳ ಕಟ್ಟಡವನ್ನು ತೆರವುಗೊಳಿಸಿ ನೂತನ ಅತ್ಯಾಧುನಿಕ ಮಾದರಿಯ ಒ.ಪಿ.ಡಿ ಕಟ್ಟಡವನ್ನು ನಿರ್ಮಿಸಲು ರಾಜ್ಯ ಸರಕಾರದಿಂದ ೭೦ ಕೋಟಿ ರೂಪಾಯಿ ಅನುದಾನ ಮಂಜೂರಾಗಿದೆ. ಅಲ್ಲಿರುವ ಎಲ್ಲಾ ವಿಭಾಗಗಳನ್ನು ಟ್ರಾಮಾ ಬ್ಲಾಕ್‌ಗೆ ಸ್ಥಳಾಂತರಿಸಿ ಹಳೆ ಒ.ಪಿ.ಡಿ ಕಟ್ಟಡವನ್ನು ಕೆಡವಲಾಗುವುದು. ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ವೆನ್‌ಲಾಕ್ ಅಧೀಕ್ಷಕ ಡಾ. ಶಿವಪ್ರಕಾಶ್ ತಿಳಿಸಿದ್ದಾರೆ.

**********

ಚತ್ತೀಸ್‌ಗಢದಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟದಲ್ಲಿಂದು ಎರಡನೇ ದಿನದ ಸ್ಪರ್ಧೆಗಳು ಮುಂದುವರಿದಿದೆ. ಕರ್ನಾಟಕ ಪದಕ ಪಟ್ಟಿಯಲ್ಲಿ ೫ ಚಿನ್ನ, ೨ ಬೆಳ್ಳಿ ಪದಕಗಳೊಂದಿಗೆ ಅಗ್ರ ಸ್ಥಾನದಲ್ಲಿದೆ. ರಾಜ್ಯದ ಈಜುಗಾರರಾದ ಎನ್. ಧೋನೀಶ್, ಪುರುಷರ ೨೦೦ ಮೀಟರ್ ಫ್ರೀ ಸ್ಟೈಲ್‌ನಲ್ಲಿ ಚಿನ್ನದ ಪದಕ ಗೆದ್ದಿದ್ದಾರೆ. ರಾಜ್ಯದವರೇ ಆದ ಕೀರ್ತನ್ ಶರತ್ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟಿದ್ದಾರೆ. ಮಹಿಳೆಯರ ೨೦೦ ಮೀಟರ್ ಫ್ರೀ ಸ್ಟೈಲ್ ವಿಭಾಗದಲ್ಲಿ ರಾಜ್ಯದ ನಿಧಿ ಎಸ್. ಬೆಳ್ಳಿ ಪದಕಕ್ಕೆ ಕೊರಳೊಡ್ಡಿದ್ದಾರೆ. ಪುರುಷರ ೧೦೦ ಮೀಟರ್ ಬ್ರೆಸ್ಟ್ ಸ್ಟ್ರೋಕ್‌ನಲ್ಲಿ ಹಾಗೂ ೫೦ ಮೀಟರ್ ಬಟರ್‌ಫ್ಲೈನಲ್ಲಿ ರಾಜ್ಯದ ಮಣಿಕಂಠ ಚಿನ್ನ ಗೆದ್ದರೆ, ಮಹಿಳೆಯರ

ವಿಭಾಗದಲ್ಲಿ ಮೆಹಂಜಲಿ ತಲಾ ಎರಡು ಚಿನ್ನದ ಪದಕಗಳನ್ನು ಬಾಚಿಕೊಂಡಿದ್ದಾರೆ. ಮೊದಲ ದಿನ ಒಟ್ಟು ೬ ಚಿನ್ನದ ಪದಕಗಳಲ್ಲಿ ೫ ಪದಕಗಳನ್ನು ಗೆದ್ದ ಕರ್ನಾಟಕ ಪ್ರಾಬಲ್ಯ ಸಾಧಿಸಿದೆ.

*****END*****